# ಕರ್ನಾಟಕ ವಿಧಾನ ಪರಿಷತ್ತು

ನೂರ ಐವತ್ತೆಂಟನೆಯ ಅಧಿವೇಶನ

(ಮುಂದುವರೆದ ಉಪವೇಶನಗಳು)

**ಕಾರ್ಯಕಲಾಪಗಳ ಪಟ್ಟಿ**

ಸೋಮವಾರ, ದಿನಾಂಕ:09ನೇ ಮಾರ್ಚ್, 2026

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

*****

## 1. ಸಂತಾಪ ಸೂಚನೆಗಳು

## 2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಐದನೇ ಪಟ್ಟಿ

## 3. ಶೂನ್ಯವೇಳೆ ಪ್ರಸ್ತಾವಗಳು

## 4. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಶಾಸಕರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೊದಲನೇ ಮತ್ತು ಎರಡನೇ ಪಟ್ಟಿಯ ರೀತ್ಯಾ.

## 5. ಗಮನ ಸೆಳೆಯುವ ಸೂಚನೆಗಳು

1. **ಶ್ರೀ ಬಸನಗೌಡ ಬಾದರ್ಲಿ** ಅವರು ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಜಿಲ್ಲಾ ಕೇಂದ್ರದಿಂದ 91 ಕಿ.ಮೀ ದೂರದಲ್ಲಿರುವ ಸಿಂಧನೂರು ತಾಲ್ಲೂಕು ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿದ್ದು, ವಿದ್ಯಾರ್ಥಿಗಳ ಸಂಖ್ಯೆ ಮತ್ತು ಭೌಗೋಳಿಕ ವ್ಯಾಪ್ತಿಯನ್ನು ಪರಿಗಣಿಸಿ ಸಿಂಧನೂರು ತಾಲ್ಲೂಕನ್ನು ನೂತನ 'ಶೈಕ್ಷಣಿಕ ಜಿಲ್ಲೆ' ಎಂದು ಘೋಷಿಸುವ ಕುರಿತು **ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ** ಸಚಿವರ ಗಮನ ಸೆಳೆಯುವುದು.

..2

2. **ಶ್ರೀ ಶಾಂತರಾಮ್ ಬುಡ್ನಸಿದ್ಧಿ** ಅವರು ಕುದುರೆಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬರುವ ಬುಡಕಟ್ಟು ಮತ್ತು ಇತರೆ ಜನಾಂಗದ ಕುಟುಂಬಗಳನ್ನು ಬೇರೆ ಕಡೆ ಸ್ಥಳಾಂತರಿಸುತ್ತಿರುವ ಹಾಗೂ ಅವರು ಸಾಗುವಳಿ ಮಾಡಿಕೊಂಡು ಬಂದ ಅರಣ್ಯ ಭೂಮಿಗೆ ಪರಿಹಾರ ನೀಡುವ ವಿಷಯದ ಕುರಿತು **ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ** ಸಚಿವರ ಗಮನ ಸೆಳೆಯುವುದು.

3. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಎಸ್. ರವಿ ಹಾಗೂ ಎಂ.ಎಲ್. ಅನಿಲ್‌ಕುಮಾರ್** ಅವರುಗಳು ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿ ನೇಮಕ ಆದೇಶವನ್ನು ಹಿಂಪಡೆದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993ರ ಪ್ರಕರಣ 8(1)ಬಿ (i)ರನ್ವಯ ಈಗಿರುವ ಸದಸ್ಯರುಗಳನ್ನೊಳಗೊಂಡ ಆಡಳಿತ ಸಮಿತಿಯ ಅವಧಿಯನ್ನು 6 ತಿಂಗಳಿಗೆ ವಿಸ್ತರಿಸುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ** ಸಚಿವರ ಗಮನ ಸೆಳೆಯುವುದು.

4. **ಶ್ರೀ ಡಿ.ಎಸ್. ಅರುಣ್** ಅವರು ಬೆಂಗಳೂರಿನ ವಿಧಾನ ಸೌಧ, ವಿಕಾಸ ಸೌಧ ಹಾಗೂ ಬಹುಮಹಡಿಗಳ ಕಟ್ಟಡ ಸುತ್ತಮುತ್ತ ಹಲವಾರು ಅನಧಿಕೃತ ಆಹಾರ ಮಳಿಗೆಗಳು ವ್ಯಾಪಾರ ನಡೆಸುತ್ತಿದ್ದು, ಅದರ ಉತ್ಪನ್ನಗಳು ಕಲುಷಿತಗೊಂಡು ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಬಗ್ಗೆ **ಮಾನ್ಯ ಉಪಮುಖ್ಯಮಂತ್ರಿಗಳ** ಗಮನ ಸೆಳೆಯುವುದು.

## 6. ನಿಯಮ 330ರ ಮೇರೆಗೆ

1. **ಡಾ. ಕೆ. ಗೋವಿಂದರಾಜ್** ಅವರು ಬೆಂಗಳೂರು ನಗರದಲ್ಲಿ ಹೆಚ್ಚುತ್ತಿರುವ ವಾಹನ ಸಂಚಾರ ದಟ್ಟಣೆ, ಕಾನೂನು ಸುವ್ಯವಸ್ಥೆ ಮತ್ತು ಕ್ರಿಮಿನಲ್ ಪ್ರಕರಣಗಳ ಸಮಸ್ಯೆಗಳ ಪರಿಹಾರಕ್ಕಾಗಿ ಪೋಲೀಸ್ ಆಯುಕ್ತರ ಮತ್ತೊಂದು ಹುದ್ದೆ ಹಾಗೂ ಇನ್ನಿತರ ಪೂರಕ ಹುದ್ದೆಗಳನ್ನು ಹೊಸದಾಗಿ ಸೃಜಿಸಿ ಪೋಲೀಸ್ ಇಲಾಖೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಕ್ರಮವಹಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

2. **ಶ್ರೀ ಕೇಶವ ಪ್ರಸಾದ್ ಎಸ್.**, ಅವರು ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕು ಟೇಕಲ್ ಹೋಬಳಿ, ಅಗಲಕೋಟೆ ಗ್ರಾಮದಲ್ಲಿ ಶಿಕ್ಷಣ ಇಲಾಖೆಗೆ ದಾನವಾಗಿ ನೀಡಲಾದ ಭೂಮಿಯ ಅತಿಕ್ರಮಣ ಹಾಗೂ ದಾಖಲೆಯ ವಂಚನೆ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಕಂದಾಯ ಸಚಿವರು)

## ೬. ವಿತ್ತೀಯ ಕಾರ್ಯಕಲಾಪ

೨೦೨೬-೨೭ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
www.kla.kar.nic.in/council/council.htm